# ಬಿಎಸ್‌ವೈ ಜತೆ ಅಸಮಾಧಾನ ಇಲ್ಲ: ಈಶ್ವರಪ್ಪ

## ನಮ್ಮ ಇಲಾಖೆ ವಿಚಾರ ರಾಜ್ಯಪಾಲರ ಗಮನಕ್ಕೆ ತರಬೇಕಿತ್ತು. ಅದನ್ನು ತಂದಿದ್ದೇನೆ ಅಷ್ಟೆ। ಇದಕ್ಕೆ ಅಷ್ಟು ಮಹತ್ವ ಕೊಡುವ ಅಗತ್ಯವಿಲ್ಲ: ಸಚಿವ

● **ಕನ್ನಡಪ್ರಭ ವಾರ್ತೆ** ಶಿವಮೊಗ್ಗ 2/4/21

ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರನ್ನು ಭೇಟಿಯಾಗಿ ದೂರು ನೀಡಿರುವ ವಿಚಾರದಲ್ಲಿ ವಿಶೇಷವೇನೂ ಇಲ್ಲ. ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಅವರ ಜತೆ ಯಾವುದೇ ಅಸಮಾಧಾನ ಇಲ್ಲ, ಅಸಮಾಧಾನವಾಗುವ ಪ್ರಶ್ನೆಯೂ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ತಿಳಿಸಿದ್ದಾರೆ.



ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಕುರಿತು ರಾಜ್ಯಪಾಲರ ಜತೆ ಆಡಳಿತಾತ್ಮಕ ಚರ್ಚೆ ನಡೆಸಬೇಕಿತ್ತು. ಹೀಗಾಗಿ ಅವರನ್ನು ಭೇಟಿಯಾಗಿ ಚರ್ಚಿಸಿದ್ದೇನೆ. ಇದಕ್ಕೆ ಅಷ್ಟೊಂದು ಮಹತ್ವ ಕೊಡುವ ಅಗತ್ಯವೇನಿಲ್ಲ. ಪ್ರತಿ ಪಕ್ಷದ ಕೆಲವರು ಇದಕ್ಕೆ ಹೆಚ್ಚು ಮಹತ್ವ ನೀಡುತ್ತಿದ್ದಾರೆ. ಅದಕ್ಕೆ ನಾನೇನು ಮಾಡಲಿ? ನಮ್ಮ ಇಲಾಖೆಯ ವಿಚಾರ ರಾಜ್ಯಪಾಲರ ಗಮನಕ್ಕೆ ತರಬೇಕಿತ್ತು. ಅದನ್ನು ತಂದಿದ್ದೇನೆ ಅಷ್ಟೆ ಎಂದರು. ನನ್ನ ಮತ್ತು ಮುಖ್ಯಮಂತ್ರಿ ಯಡಿಯೂರಪ್ಪ ನಡುವೆ ಯಾವುದೇ ಅಸಮಾಧಾನವಿಲ್ಲ, ಅಸಮಾಧಾನವಾಗುವ ಪ್ರಶ್ನೆಯೂ ಇಲ್ಲ. ಇಲಾಖೆಯ ವಿಚಾರ ಚರ್ಚಿಸಲು ರಾಜ್ಯಪಾಲರಷ್ಟೇ ಅಲ್ಲ, ಅಗತ್ಯವಿದ್ದರೆ ದೆಹಲಿಗೂ ಹೋಗುತ್ತೇನೆ ಎಂದರು.

## ಈಶ್ವರಪ್ಪ ನಡೆಗೆ ಅರುಣ್ ಸಿಂಗ್ ಬೇಸರ

### ರಾಜ್ಯಪಾಲರಿಗೆ ಪತ್ರ ಬರೆಯೋದು ಸರಿಯಲ್ಲ। ಸಿಎಂ ಜತೆ ಚರ್ಚಿಸಬೇಕಿತ್ತು

**ನವದೆಹಲಿ:** ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಕಾರ್ಯವೈಖರಿ ವಿರುದ್ಧ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ ಅವರು ರಾಜ್ಯಪಾಲರಿಗೆ ಪತ್ರ ಬರೆದಿರುವುದಕ್ಕೆ ಕರ್ನಾಟಕದ ಉಸ್ತುವಾರಿ ಹಾಗೂ ಬಿಜೆಪಿ ಪ್ರಧಾನಕಾರ್ಯದರ್ಶಿ ಅರುಣ್ ಸಿಂಗ್ ಗುರುವಾರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಈಶ್ವರಪ್ಪ ಹಿರಿಯ ಸಚಿವರು. ಒಂದು ವೇಳೆ ಈಶ್ವರಪ್ಪ ಅವರಿಗೆ ಸಮಸ್ಯೆ ಇದ್ದರೆ ಅದನ್ನು ಅವರು ನೇರವಾಗಿ ಮುಖ್ಯಮಂತ್ರಿಗಳ ಜೊತೆ ಮಾತನಾಡಿ ಬಗೆಹರಿಸಿಕೊಳ್ಳಬೇಕಿತ್ತು. ಅದು ಬಿಟ್ಟು ರಾಜ್ಯಪಾಲರಿಗೆ ಪತ್ರ ಬರೆಯುವುದು ಸರಿಯಾದ ಕ್ರಮ ಅಲ್ಲ. ಏನೇ ಇದ್ದರೂ ಪಕ್ಷದ ವೇದಿಕೆಯಲ್ಲಿ ಪ್ರಸ್ತಾಪ ಮಾಡಬೇಕಿತ್ತು' ಎಂದು ಹೇಳಿದರು.

'ಈಗ ಚುನಾವಣೆ ಮೇಲೆ ಗಮನ ಹರಿಸಿದ್ದೇವೆ. ಬಳಿಕ ನಾವು ಈ ಪತ್ರದ ಬಗ್ಗೆ ಚರ್ಚೆ ಮಾಡುತ್ತೇವೆ' ಎಂದು ಅರುಣ್ ಸಿಂಗ್ ಅವರು ನುಡಿದರು.

ಇದೇ ವೇಳೆ ಕರ್ನಾಟಕದ ಮೂರು ಕ್ಷೇತ್ರಗಳ ಉಪಚುನಾವಣೆಯ ಕುರಿತು ಪ್ರತಿಕ್ರಿಯಿಸಿದ ಅವರು, 'ಎಲ್ಲಾ ಮೂರು ಕ್ಷೇತ್ರಗಳಲ್ಲಿಯೂ ನಾವು ಗೆಲವು ಸಾಧಿಸಲಿದ್ದೇವೆ' ಎಂದು ವಿಶ್ವಾಸ ವ್ಯಕ್ತಪಡಿಸಿದದರು.

## ಈಶ್ವರಪ್ಪ ದೂರಿನ ಬೆನ್ನಲ್ಲೇ ₹65 ಕೋಟಿ ಬಿಡುಗಡೆಗೆ ತಡೆ

### ಬೆಂ.ನಗರ ಜಿಪಂ ಅನುದಾನ ತಡೆದ ಗ್ರಾಮೀಣಾಭಿವೃದ್ಧಿ ಇಲಾಖೆ

**ಬೆಂಗಳೂರು:** ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಹಸ್ತಕ್ಷೇಪ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿಗಳ ವಿರುದ್ಧ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಸಿಡಿದೆದ್ದ ಹಿನ್ನೆಲೆಯಲ್ಲಿ ಬೆಂಗಳೂರು ಜಿಪಂಗೆ ಬಿಡುಗಡೆಯಾಗಿದ್ದ ₹65 ಕೋಟಿ ಕ್ರಿಯಾಯೋಜನೆಗೆ ತಡೆಹಿಡಿಯುವಂತೆ ನಿರ್ದೇಶನ ನೀಡಲಾಗಿದೆ.

ಗ್ರಾಮೀಣಾಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿ ಸೂಚನೆ ಮೇರೆಗೆ ಇಲಾಖೆಯ ಉಪನಿರ್ದೇಶಕ ಡಿ.ಓ.ರಮೇಶ್ ಅವರು ಬೆಂಗಳೂರು ನಗರ ಜಿಪಂ ಸಿಇಒಗೆ ಸೂಚಿಸಿದ್ದಾರೆ. ಸಿಎಂ ತಮ್ಮ ಹತ್ತಿರ ಸಂಬಂಧಿಯಾಗಿರುವ ಜಿಪಂ ಅಧ್ಯಕ್ಷ ಮರಿಸ್ವಾಮಿ ಶಿಫಾರಸು ಮೇರೆಗೆ ₹65 ಕೋಟಿ ಅನುದಾನವನ್ನು ಬೆಂಗಳೂರು ನಗರ ಜಿಪಂಗೆ ನೇರವಾಗಿ ಬಿಡುಗಡೆ ಮಾಡಿದ್ದಾರೆ. ಸರ್ಕಾರಿ ಆದೇಶ ಹೊರಡಿಸುವ ಮುನ್ನ ಸಚಿವರ ಅನುಮೋದನೆ ಕಡ್ಡಾಯ. ಆದರೆ, ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಮೇಲೆ ಸಿಎಂ ಆದೇಶ ಹೊರಡಿಸಲು ಒತ್ತಡ ಹೇರಿದ್ದರು. ಆದೇಶ ಹೊರಡಿಸಿದ ಬಳಿಕ ಇಲಾಖೆಯ ಸಚಿವರ ಗಮನಕ್ಕೆ ತರುವಂತೆ ತಿಳಿಸಿದ್ದಾರೆ. ಇದು ರಾಜ್ಯದ ಸರ್ಕಾರದ ನಿಯಮಾವಳಿಗಳ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಈಶ್ವರಪ್ಪ ಆರೋಪಿಸಿದ್ದರು.